(4)

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 688
ಸದಸ್ಯರ ಹೆಸರು : ಶ್ರೀ. ಎನ್ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 14.12.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಧಾರವಾಡ ಮತ್ತು ಗುಲ್ಬರ್ಗಾ ವಿಭಾಗದಲ್ಲಿ ಮುಖ್ಯ ಶಿಕ್ಷಕರಾಗಿ ನೇಮಕಗೊಂಡು, ಒಂದೇ ಹುದ್ದೆಯಲ್ಲಿ 20 ವರ್ಷಗಳ ಕಾಲ ಸೇವೆ ಸಲ್ಲಿಸಿದ ಮುಖ್ಯ ಶಿಕ್ಷಕರಿಗೆ 20 ವರ್ಷದ ಕಾಲಮಿತಿ ವೇತನ ಬಡ್ತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಬಂದಿದೆ |
| ಆ | ಬಂದಿದ್ದಲ್ಲಿ, ಮೈಸೂರು ಮತ್ತು ಬೆಂಗಳೂರು ವಿಭಾಗದಲ್ಲಿ ಮುಖ್ಯ ಶಿಕ್ಷಕರರಾಗಿ ನೇಮಕಗೊಂಡು, ಒಂದೇ ಹುದ್ದೆಯಲ್ಲಿ 20 ವರ್ಷಗಳಿಂದ ಕಾರ್ಯ ನಿರ್ವಹಿಸಿರುವ ಮುಖ್ಯ ಶಿಕ್ಷಕರಿಗೆ 20 ವರ್ಷಗಳ ಕಾಲಮಿತಿ ವೇತನ ಬಡ್ತಿ ನೀಡದೇ ಇರುವ ಕಾರಣಗಳೇನು; (ವಿವರ ನೀಡುವುದು) | ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಲ್ಲಿ ಸತತ 20 ವರ್ಷಗಳ ಸೇವೆಯನ್ನು ಸಲ್ಲಿಸಿದ್ದು, ಯಾವುದೇ ಪದೋನ್ನತಿ ಪಡೆಯದೆ ಇರುವುದರಿಂದ ಪ್ರಸ್ತುತ 20 ವರ್ಷಗಳ ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 13 ಎಸ್‌ಆರ್‌ಪಿ 2002 ದಿನಾಂಕ:09/05/2002 ಸರ್ಕಾರದ ಆದೇಶದಲ್ಲಿ ಮಿತಿಗೊಳಿಸಿರುವ ವೇತನ ಶ್ರೇಣಿಗಳನ್ನು ಸದರಿ ಅಧಿಕಾರಿಗಳು ಮೀರಿರುತ್ತಾರೆ (ಪ್ರಸ್ತುತ 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಪರಿಷ್ಕೃತ ವೇತನ ಶ್ರೇಣಿ:48900-92700) 01/04/2002ರಂತೆ ಮುಖ್ಯ ಶಿಕ್ಷಕರ ವೇತನ ಶ್ರೇಣಿ 6000-11200 ಇದ್ದು ಸದರಿ ಆದೇಶದಲ್ಲಿ ತಿಳಿಸಿರುವ ವೇತನ ಶ್ರೇಣಿಯಾಗಿದ್ದು, ಸದರಿ ಆದೇಶದಲ್ಲಿನ ಕಂಡಿಕೆ 6(ii) ರಲ್ಲಿ ಈ ಆದೇಶಗಳು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಪ್ರಾಥಮಿಕ / ಪ್ರೌಢಶಾಲೆಗಳ ಎಲ್ಲಾ ವರ್ಗದ ಶಿಕ್ಷಕರಿಗೆ ಅನ್ವಯವಾಗತಕ್ಕದ್ದಲ್ಲ ಎಂದು ಈ ಆದೇಶದಲ್ಲಿರುತ್ತದೆ.<br><br>ಆದ್ದರಿಂದ ಈ ಗೊಂದಲವನ್ನು ನಿವಾರಿಸುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಇ | ಯಾವ ಕಾಲಮಿತಿಯೊಳಗೆ ಸದರಿ ಕಾಲಮಿತಿ ವೇತನ ಬಡ್ತಿಯನ್ನು ನೀಡಲಾಗುವುದು? | |

ಸಂಖ್ಯೆ: ಇಪಿ 198 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು